# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1433
ಮಾನ್ಯ ಸದಸ್ಯರ ಹೆಸರು : ಶ್ರೀ ಐವನ್ ಡಿ'ಸೋಜಾ (ವಿಧಾನಸಭಾ ಕ್ಷೇತ್ರ)
ಉತ್ತರಿಸುವ ದಿನಾಂಕ : 18/12/2025
ಉತ್ತರಿಸುವ ಸಚಿವರು: : ಮಾನ್ಯ ಮುಖ್ಯಮಂತ್ರಿಯವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆಯ ವಾರ್ತಾ ಇಲಾಖೆಗೆ ಹೊಸ ವಾಹನವನ್ನು ನೀಡಬೇಕೆಂಬ ಬೇಡಿಕೆಯನ್ನು ಇಲಾಖೆ ಪರಿಗಣಿಸುವುದೇ : | ದಕ್ಷಿಣ ಕನ್ನಡ ಜಿಲ್ಲೆಯ ವಾರ್ತಾ ಇಲಾಖೆಗೆ ಹೊಸ ವಾಹನವನ್ನು ನೀಡಲು ಪರಿಗಣಿಸಲಾಗಿದೆ. |
| ಆ) | ಇಲಾಖೆಯಲ್ಲಿ ವಾಹನಗಳಿಲ್ಲದೇ ಸುದ್ದಿಗಳನ್ನು ಸಂಗ್ರಹಿಸಲು ಸಾಧ್ಯವಿಲ್ಲ ಎಂಬುವುದು ಇಲಾಖೆ ಗಮನಕ್ಕೆ ಬಂದಿದೆಯೇ; ವಾರ್ತಾ ಇಲಾಖೆಗೆ ಮಿನಿ ಬಸ್ ಇಲ್ಲದೇ ತೊಂದರೆ ಅನುಭವಿಸುತ್ತಿದ್ದು, ಅದನ್ನು ದೊರಕಿಸಿ ಕೊಡಲು ಕೂಡಲೇ ಕ್ರಮ ಕೈಗೊಳ್ಳುವುದೇ | ಪ್ರಸ್ತುತ ಟಾಟಾ ಸುಮೋ ವಾಹನವನ್ನು ಒದಗಿಸಲಾಗಿದೆ. ಪತ್ರಿಕಾ ಪ್ರವಾಸಕ್ಕೆ ಮಿನಿ ಬಸ್ ಖರೀದಿಸಲು ಆರ್ಥಿಕ ಇಲಾಖೆಯು ಮಂಜೂರಾತಿ ನೀಡಿದ್ದು, ಖರೀದಿ ಪ್ರಕ್ರಿಯೆ ಜಾರಿಯಲ್ಲಿದೆ. |
| ಇ) | ವಾಹನ ಚಾಲಕರು ನಿವೃತ್ತಿ ಹೊಂದಿದ್ದು, ಖಾಯಂ ನೌಕರರು ಇಲ್ಲದೇ ಸಂಕಷ್ಟ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಭರ್ತಿ ಮಾಡಲು ಈ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳುವುದೇ ; | ಪ್ರಸ್ತುತ ವಾಹನ ಚಾಲಕರ ಹುದ್ದೆಗೆ ನೇರ ನೇಮಕಾತಿ ಮಾಡಿಕೊಳ್ಳುತ್ತಿಲ್ಲವಾದ್ದರಿಂದ, ಇಲಾಖೆಯಲ್ಲಿ ಖಾಲಿ ಇರುವ ವಾಹನ ಚಾಲಕರ ಹುದ್ದೆಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ಪಡೆದು ಕಾರ್ಯ ನಿರ್ವಹಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |
| ಈ) | ವಾರ್ತಾ ಇಲಾಖೆಯನ್ನು ನಿರ್ಲಕ್ಷಿಸುತ್ತಿದೆ ಎಂಬ ದೂರುಗಳಿದ್ದು, ಇದರ ಉನ್ನತೀಕರಣಕ್ಕೆ ಸರ್ಕಾರ ಕ್ರಮ ಕೈಗೊಳ್ಳುವುದೇ ? | ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯನ್ನು ನಿರ್ಲಕ್ಷಿಸಲಾಗಿರುವುದಿಲ್ಲ. ಇಲಾಖೆಯಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿಗಳ ಅನೇಕ ಹುದ್ದೆಗಳು ಖಾಲಿಯಿದ್ದು, ಸದ್ಯಕ್ಕೆ ಪೂರ್ಣ ಪ್ರಮಾಣದಲ್ಲಿ ಅಧಿಕಾರಿಗಳು/ಸಿಬ್ಬಂದಿಯನ್ನು ಜಿಲ್ಲಾ ಕಛೇರಿಗಳಿಗೆ ನಿಯೋಜಿಸಲು ಸಾಧ್ಯವಾಗುತ್ತಿಲ್ಲ. ಪ್ರಸ್ತುತ ವೃಂದ ಮತ್ತು ನೇಮಕಾತಿ ನಿಯಮಗಳ ಸಮಗ್ರ ಪರಿಷ್ಕರಣೆ ಮಾಡುತ್ತಿದ್ದು, ಪ್ರಕ್ರಿಯೆ ಪೂರ್ಣಗೊಂಡ ನಂತರ ಆರ್ಥಿಕ ಇಲಾಖೆಯ ಅನುಮೋದನೆ ಪಡೆದು ಅಗತ್ಯ ಕ್ರಮ ಕೈಗೊಳ್ಳಲಾಗುವುದು. |

**ಸಂಖ್ಯೆ: ಕೆಸಿಐ-ಪಿಐಪಿ/299/2025**

(ಸಿದ್ದರಾಮಯ್ಯ)
ಮುಖ್ಯಮಂತ್ರಿ